# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 706 (813) |
| 2. ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಸಿ.ಟಿ. ರವಿ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| 3. ಉತ್ತರಿಸಬೇಕಾದ ದಿನಾಂಕ | : | 16.12.2024 |
| 4. ಉತ್ತರಿಸಬೇಕಾದ ಸಚಿವರು | : | ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು |

| ಕ್ರಮ. ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಪಶ್ಚಿಮ ಘಟ್ಟಗಳ ರಕ್ಷಣೆಗೆ ಡಾ:ಕಸ್ತೂರಿ ರಂಗನ್ ನೇತೃತ್ವದ ಸಮಿತಿಯ ವರದಿಯನ್ನು ಅನುಷ್ಠಾನಗೊಳಿಸಲು ಸಾರ್ವಜನಿಕರ ವಿರೋಧ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br>ಪಶ್ಚಿಮ ಘಟ್ಟ ಪ್ರದೇಶವನ್ನು ಪರಿಸರ ಸೂಕ್ಷ್ಮ ಪ್ರದೇಶ ಎಂದು ಘೋಷಿಸುವ ಸಂಬಂಧ ಜನಪ್ರತಿನಿಧಿಗಳಿಂದ ಪಡೆದ ಸಲಹೆ-ಸೂಚನೆಗಳನ್ನು ಪರಿಗಣಿಸಿ ಸಚಿವ ಸಂಪುಟ ಉಪ ಸಮಿತಿಯು ದಿನಾಂಕ:20.09.2024 ರಂದು ನಡೆದ ಸಭೆಯಲ್ಲಿ ಸದರಿ ವಿಷಯವನ್ನು ರಾಜ್ಯ ಸಚಿವ ಸಂಪುಟದ ನಿರ್ಣಯಕ್ಕಾಗಿ ಮಂಡಿಸಲು ತೀರ್ಮಾನಿಸಲಾಗಿರುತ್ತದೆ. ಅದರಂತೆ, ಕೇಂದ್ರ ಸರ್ಕಾರದ ದಿನಾಂಕ:31.07.2024 ರ ಕರಡು ಅಧಿಸೂಚನೆಯ ವಿಷಯದಲ್ಲಿ ರಾಜ್ಯ ಸರ್ಕಾರದ ಸಮರ್ಪಕ ನಿಲುವು ತೆಗೆದುಕೊಳ್ಳಲು ದಿನಾಂಕ: 25.09.2024 ರಂದು ಜರುಗಿದ ಸಚಿವ ಸಂಪುಟದ ಸಭೆಯಲ್ಲಿ ಡಾ. ಕಸ್ತೂರಿ ರಂಗನ್ ವರದಿಯನ್ನು ಸಂಪೂರ್ಣವಾಗಿ ತಿರಸ್ಕರಿಸಲು ನಿರ್ಣಯಿಸಿರುತ್ತದೆ. ಅದರನ್ವಯ, ಡಾ|| ಕಸ್ತೂರಿ ರಂಗನ್ ಸಮಿತಿಯ ವರದಿಯ ಶಿಫಾರಸ್ಸುಗಳನ್ನು ನಿರಾಕರಿಸಿ, ವರದಿ ಸಂಬಂಧ ಹೊರಡಿಸಿದ ಕರಡು ಅಧಿಸೂಚನೆಯನ್ನು ತಿರಸ್ಕರಿಸುವ ರಾಜ್ಯ ಸರ್ಕಾರದ ನಿಲುವನ್ನು ಡಾ|| ಎಸ್. ಕೆರ್ಕಟ್ಟಾ, MoEF & CC, ನವದೆಹಲಿ ರವರಿಗೆ ದಿನಾಂಕ: 30.09.2024 ರ ಪತ್ರವನ್ನು ಬರೆಯಲಾಗಿದೆ. |
| ಆ) | ಬಂದಿದ್ದಲ್ಲಿ, ಈ ವರದಿ ಅನುಷ್ಠಾನದ ಕುರಿತು ಸರ್ಕಾರದ ನಿಲುವೇನು; | |
| ಇ) | ಶ್ರೀ ಮಾಧವ ಗಾಡ್ಗೀಳ್ ವರದಿ ಹಾಗೂ ಡಾ||ಕಸ್ತೂರಿ ರಂಗನ್ ವರದಿಯಲ್ಲಿ ಪಶ್ಚಿಮ ಘಟ್ಟ ಸಂರಕ್ಷಣೆಗೆ ಸಂಬಂಧಿಸಿದಂತೆ ಯಾವ ಯಾವ ಅಂಶಗಳಿಗೆ; ಈ ಎರಡೂ ವರದಿಗಳಲ್ಲಿರುವ ವ್ಯತ್ಯಾಸಗಳೇನು; | ಶ್ರೀ ಮಾಧವ ಗಾಡ್ಗೀಳ್ ವರದಿ ಹಾಗೂ ಡಾ||ಕಸ್ತೂರಿ ರಂಗನ್ ವರದಿಯಲ್ಲಿ ಈ ಕೆಳಕಂಡ ಅಂಶಗಳನ್ನು ಒಳಗೊಂಡಿರುತ್ತದೆ. |

| ಶ್ರೀ ಮಾಧವ ಗಾಡ್ಗೀಳ್ ವರದಿ | ಡಾ||ಕಸ್ತೂರಿ ರಂಗನ್ ವರದಿ |
|---|---|
| • ಪ್ರೊ|| ಮಾದವ್ ಗಾಡ್ಗೀಳ್ ಸಮಿತಿಯ ವರದಿಯಲ್ಲಿ ಒಟ್ಟು 1,29,037 ಚದರ ಕಿ.ಮೀ. ವ್ಯಾಪ್ತಿಯ ಪಶ್ಚಿಮ ಘಟ್ಟಗಳ ಪ್ರದೇಶವನ್ನು ಗುರುತಿಸಿ ಮೂರು | • ಡಾ|| ಕೆ. ಕಸ್ತೂರಿರಂಗನ್ ವರದಿಯಲ್ಲಿ ಭಾರತದ ಆರು ರಾಜ್ಯಗಳ ಅಂದಾಜು 56000 ಚದರ ಕಿ.ಮೀ. ಪ್ರದೇಶವನ್ನು ಪರಿಸರ ಸೂಕ್ಷ್ಮ ಪ್ರದೇಶ (Eco- |

| | | | |
|---|---|---|---|
| | | ಪರಿಸರ ಸೂಕ್ಷ್ಮ ವಲಯಗಳಾಗಿ (ESZ 1, ESZ 2 & ESZ 3) ವರ್ಗೀಕರಿಸಲಾಗಿರುತ್ತದೆ.<br>• ಈ ವಿಶಾಲವಾದ ಪ್ರದೇಶಗಳನ್ನು ಸಂರಕ್ಷಿಸುವ ಕುರಿತು ಹಲವು ಶಿಫಾರಸ್ಸುಗಳನ್ನು ನೀಡಲಾಗಿದೆ.<br>• ಸದರಿ ವರದಿಯಲ್ಲಿ ಅಸ್ತಿತ್ವದಲ್ಲಿರುವ ಕೆಂಪು ಮತ್ತು ಕಿತ್ತಳೆ ಕೈಗಾರಿಕೆಗಳು 2016ರ ವೇಳೆಗೆ ಶೂನ್ಯ-ಹೊರಸೂಸುವಿಕೆ ಕೈಗಾರಿಕೆಗಳಾಗಿ ಪರಿವರ್ತನೆಗೊಳ್ಳಬೇಕು ಮತ್ತು ಪ್ರಗತಿಯ ಮೇಲ್ವಿಚಾರಣೆಗಾಗಿ ಸಾಮಾಜಿಕ ಲೆಕ್ಕಪರಿಶೋಧನಾ ಕಾರ್ಯವಿಧಾನವನ್ನು ಸ್ಥಾಪಿಸಲು ಶಿಫಾರಸ್ಸು ಮಾಡಿದೆ. ಪಶ್ಚಿಮ ಘಟ್ಟಗಳ ಗಡಿಯಲ್ಲಿರುವ 142 ತಾಲ್ಲೂಕುಗಳನ್ನು 1,2 ಮತ್ತು 3ನೇ ವರ್ಗದ ಪರಿಸರ ಸೂಕ್ಷ್ಮ ವಲಯಗಳಾಗಿ ವಿಂಗಡಿಸಲಾಗಿದೆ | Sensitive Area) ಗಳಾಗಿ ಶಿಫಾರಸ್ಸು ಮಾಡಲಾಗಿರುತ್ತದೆ.<br>• ಅದರಲ್ಲಿ ಕರ್ನಾಟಕದ 20,668 ಚದರ ಕಿಮೀ ಪ್ರದೇಶವನ್ನು ಒಳಗೊಂಡಿದ್ದು, ರಾಜ್ಯದ 10 ಜಿಲ್ಲೆಗಳಲ್ಲಿ 33 ತಾಲ್ಲೂಕುಗಳ 1576 ಗ್ರಾಮಗಳನ್ನು ಗುರುತಿಸಲಾಗಿದೆ.<br>• ಸದರಿ ವರದಿಯಲ್ಲಿ ಗಣಿಗಾರಿಕೆ, ಕಲ್ಲುಗಣಿಗಾರಿಕೆ, ಮರಳು ಗಣಿಗಾರಿಕೆಗಳ ಸಂಪೂರ್ಣ ನಿಷೇಧ, (ಅಸ್ತಿತ್ವದಲ್ಲಿರುವ ಗುತ್ತಿಗೆಗಳು 5 ವರ್ಷದೊಳಗೆ ಸ್ಥಗಿತಗೊಳ್ಳಬೇಕು) ಹಾಗೂ ಹೊಸ ಸ್ಥಾವರಗಳು ಹಾಗೂ ವಿಸ್ತರಣೆಗೆ ನಿರ್ಬಂಧಿಸಲಾಗಿದೆ. ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯು ನಿರ್ದಿಷ್ಟಪಡಿಸಿದ ಎಲ್ಲಾ ಹೊಸ 'ಕೆಂಪು' ವರ್ಗದ ಕೈಗಾರಿಕೆಗಳು ಹಾಗೂ ಈಗಾಗಲೇ ಅಸ್ತಿತ್ವದಲ್ಲಿರುವ ಅಂತಹ ಕೈಗಾರಿಕೆಗಳ ವಿಸ್ತರಣೆಗೆ ನಿಷೇಧಿಸಿದ್ದು, ಆಸ್ಪತ್ರೆಗಳು ಸೇರಿದಂತೆ ಅಸ್ತಿತ್ವದಲ್ಲಿರುವ ಅಂತಹ ಕೆಂಪು ವರ್ಗದ ಕೈಗಾರಿಕೆಗಳು ನಿಯಮಾನುಸಾರ ಮುಂದುವರಿಯಬಹುದಾಗಿತಿಳಿಸಿದೆ. |
| (ಈ) | ಈ ವರದಿಯನ್ನು ಅನುಷ್ಠಾನಗೊಳಿಸುವುದರಿಂದ ಸಾರ್ವಜನಿಕರಿಗೆ ಅನ್ಯಾಯವಾಗದಂತೆ ಸರ್ಕಾರ ಏನು ಕ್ರಮಕೈಗೊಳ್ಳಲಿದೆ? | ಡಾ. ಕಸ್ತೂರಿ ರಂಗನ್ ವರದಿಯನ್ನು ಸಂಪೂರ್ಣವಾಗಿ ತಿರಸ್ಕರಿಸಲು ನಿರ್ಣಯಿಸಿರುತ್ತದೆ. ಅದರನ್ವಯ, ಡಾ\|\| ಕಸ್ತೂರಿ ರಂಗನ್ ಸಮಿತಿಯ ವರದಿಯ ಶಿಫಾರಸ್ಸುಗಳನ್ನು ನಿರಾಕರಿಸಿ, ವರದಿ ಸಂಬಂಧ ಹೊರಡಿಸಿದ ಕರಡು ಅಧಿಸೂಚನೆಯನ್ನು ತಿರಸ್ಕರಿಸುವ ರಾಜ್ಯ ಸರ್ಕಾರದ ನಿಲುವನ್ನು ಡಾ\|\| ಎಸ್. ಕೆರ್ಕಟ್ಟಾ, MoEF & CC, ನವದೆಹಲಿ ರವರಿಗೆ ದಿನಾಂಕ: 30.09.2024 ರ ಪತ್ರವನ್ನು ಬರೆಯಲಾಗಿದೆ. | |

**ಕಡತ ಸಂಖ್ಯೆ:** ಅಪಜೀ 269 ಇಎನ್ ವಿ 2024

Bkhandre

**(ಈಶ್ವರ್ ಬಿ. ಖಂಡ್ರೆ)**
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖಾ ಸಚಿವರು